ದಿನಾಂಕ 15-04-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಗಳ ಪರ ಶ್ರೀ ಎಸ್.ಎಂ.ಎ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಯತ್ತಿನಹಳ್ಳಿ ಗ್ರಾಮದ ಸ ನಂಃ86/2 ಅ/1 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ಶ್ಯಾಡಗುಪ್ಪಿ ಗ್ರಾಮದ ಸ ನಂಃ7/2 ಬ ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು, ಬಸವರಾಜ ರವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-3 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

**Sd/-**

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.

ಸಾಕ್ಷಿದಾರರ ಸಹಿ